# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 203 ಜಿಪಸ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು. ದಿನಾಂಕ:31-07-2017.

## ಸುತ್ತೋಲೆ

**ವಿಷಯ:** ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯು ಆಯೋಜಿಸುವ ತರಬೇತಿ ಕಾರ್ಯಕ್ರಮಗಳಿಗೆ ತಾಲ್ಲೂಕು ಪಂಚಾಯಿತಿಗಳ ಕಾರ್ಯ ನಿರ್ವಾಹಕ ಅಧಿಕಾರಿಗಳನ್ನು ನೋಡೆಲ್ ಅಧಿಕಾರಿಗಳನ್ನಾಗಿ ನೇಮಿಸುವ ಕುರಿತು.

**ಉಲ್ಲೇಖ:**
1. ದಿನಾಂಕ:11-08-2016 ರ ಅ.ನ.ಸಾ.ರಾ.ಗ್ರಾ & ಪಂ.ರಾಜ್ ಸಂಸ್ಥೆಯ ಆಡಳಿತ ಮಂಡಳಿ ಸಭೆಯ ತೀರ್ಮಾನ.
2. ದಿನಾಂಕ:03-11-2016 ರ ಅ.ನ.ಸಾ.ರಾ.ಗ್ರಾ & ಪಂ.ರಾಜ್ ಸಂಸ್ಥೆಯ ಕಾರ್ಯಕಾರಿ ಸಮಿತಿ ಸಭೆಯ ತೀರ್ಮಾನ.
3. ಅ.ನ.ಸಾ.ರಾ.ಗ್ರಾ & ಪಂ.ರಾಜ್ ಸಂಸ್ಥೆಯ ಪತ್ರ ಸಂ: ರಾಗ್ರಾಸಂ:ಆಪ್ತಶಾಖೆ:ಇತರೆ: 2016-17, ದಿನಾಂಕ: 20-01-2017.

* * *

ಭಾರತ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮಂತ್ರಾಲಯಗಳು ಹಾಗೂ ಕರ್ನಾಟಕ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು, ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿಗಳನ್ನು ಆಯೋಜಿಸಲು "ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು" ಸಂಸ್ಥೆಯನ್ನು ನೋಡೆಲ್ ಸಂಸ್ಥೆಯನ್ನಾಗಿ ಗುರುತಿಸಿದೆ. ಈ ತರಬೇತಿ ಸಂಸ್ಥೆಯಲ್ಲಿ ಹಮ್ಮಿಕೊಳ್ಳುವ ಎಲ್ಲಾ ತರಬೇತಿ ಚಟುವಟಿಕೆಗಳು, ಅಧ್ಯಯನಗಳು ಹಾಗೂ ಸಂಶೋಧನೆಗಳನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳು ನೀಡುವ ಮಾರ್ಗದರ್ಶನ, ನಿರ್ದೇಶನ ಹಾಗೂ ಆದೇಶಗಳಂತೆ ಹಮ್ಮಿಕೊಳ್ಳಲಾಗುವುದು.

"ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು" ಸಂಸ್ಥೆಗೆ ಜುಲೈ-2016 ರಲ್ಲಿ ಸ್ವಾಯತ್ತ ಸಂಸ್ಥೆಯ ಸ್ಥಾನಮಾನ ನೀಡಲಾಗಿದ್ದು, ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಚಿವರು, ಸಂಸ್ಥೆಯ ಆಡಳಿತ ಮಂಡಳಿಯ ಅಧ್ಯಕ್ಷರಾಗಿರುತ್ತಾರೆ. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರು ಸಂಸ್ಥೆಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷರಾಗಿರುತ್ತಾರೆ. ಸಂಸ್ಥೆಯು, ತನ್ನ ಎಲ್ಲಾ ಕಾರ್ಯಚಟುವಟಿಕೆಗಳನ್ನು, ಸದರಿ ಸಮಿತಿಗಳ ಮಾರ್ಗದರ್ಶನ ಹಾಗೂ ನಿರ್ದೇಶನದಂತೆ ಕಾರ್ಯನಿರ್ವಹಿಸಲಾಗುತ್ತಿದೆ.

ಸಂಸ್ಥೆಯು, ರಾಜ್ಯದ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಮತ್ತು ಅಧಿಕಾರಿಗಳಿಗೆ ಮುಖಾ-ಮುಖಿ ಮತ್ತು ಉಪಗ್ರಹ ಆಧಾರಿತ ಸಾಮರ್ಥ್ಯಾಭಿವೃದ್ಧಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಇತ್ತೀಚಿನ ದಿನಗಳಲ್ಲಿ, ತರಬೇತಿ ಕಾರ್ಯಕ್ರಮಗಳನ್ನು, ವಿಕೇಂದ್ರೀಕೃತ ಮಾದರಿಯಲ್ಲಿ, ಜಿಲ್ಲಾ ಮಟ್ಟದಲ್ಲಿ, ತಾಲ್ಲೂಕು ಪಂಚಾಯಿತಿಯ ಸಾಮರ್ಥ್ಯ ಸೌಧಗಳಲ್ಲಿ ಹಾಗೂ ಗ್ರಾಮ ಪಂಚಾಯಿತಿ ಮಟ್ಟಗಳಲ್ಲೂ ಕೂಡ ಆಯೋಜಿಸುವ ಬಗ್ಗೆ ಸರ್ಕಾರವು ನಿರ್ಧಾರ ಮಾಡಿದೆ. ಮುಂದುವರೆದು, ತರಬೇತಿ ಕಾರ್ಯಕ್ರಮಗಳನ್ನು ವ್ಯವಸ್ಥಿತವಾಗಿ ಮತ್ತು ಪರಿಣಾಮಕಾರಿಯಾಗಿ ಆಯೋಜಿಸಲು ಸೂಕ್ತ ಮೇಲ್ವಿಚಾರಣೆ ಮತ್ತು ಉಸ್ತುವಾರಿ ಮಾಡುವಂತೆ ಸಂಸ್ಥೆಗೆ ನಿರ್ದೇಶನ ನೀಡಲಾಗಿದೆ. ಏಕ ಕಾಲದಲ್ಲಿ ತರಬೇತಿಯನ್ನು ಎಲ್ಲಾ ಜಿಲ್ಲೆ/ತಾಲ್ಲೂಕು/ಗ್ರಾಮ

ಪಂಚಾಯಿತಿಗಳಲ್ಲಿ ನಡೆಸುವ ಸಂದರ್ಭದಲ್ಲಿ, ಸಂಸ್ಥೆಯ ವತಿಯಿಂದ, ಉಸ್ತುವಾರಿ ಮತ್ತು ಮೇಲ್ವಿಚಾರಣೆ ನಡೆಸಲು ಹಾಗೂ ತರಬೇತಿಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಹೆಚ್ಚಿನ ಜವಾಬ್ದಾರಿಯನ್ನು, ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ನಿರ್ವಹಿಸುವ ಅವಶ್ಯಕತೆಯಿದೆ. ಈ ಹಿನ್ನೆಲೆಯಲ್ಲಿ, ತರಬೇತಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಉಲ್ಲೇಖ (1) ಮತ್ತು (2) ರ ಅ.ನ.ಸಾ.ರಾ.ಗ್ರಾ & ಪಂ.ರಾಜ್ ಸಂಸ್ಥೆಯ ಆಡಳಿತ ಮಂಡಳಿ ಹಾಗೂ ಕಾರ್ಯಕಾರಿ ಸಮಿತಿಯ ನಿರ್ಣಯಗಳನ್ವಯ ನೋಡೆಲ್ ಅಧಿಕಾರಿಯಾಗಿ ನೇಮಿಸಿದೆ.

ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯು ಆಯೋಜಿಸುವ ಎಲ್ಲಾ ತರಬೇತಿ ಕಾರ್ಯಕ್ರಮಗಳ/ಸಂಶೋಧನಾ ಚಟುವಟಿಕೆಗಳ/ಅಧ್ಯಯನಗಳು/ಕ್ಷೇತ್ರ ಭೇಟಿ/ಯಶೋಗಾಥೆ ಮತ್ತು ದಾಖಲೀಕರಣ ಚಟುವಟಿಕೆಗಳನ್ನು ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿಗಳ ಮಟ್ಟದಲ್ಲಿ ಆಯೋಜಿಸುವ ಸಂದರ್ಭದಲ್ಲಿ, ತರಬೇತಿ ಚಟುವಟಿಕೆಗಳ ನೋಡೆಲ್ ಅಧಿಕಾರಿಗಳು ಈ ಕೆಳಕಂಡ ಜವಾಬ್ದಾರಿಗಳನ್ನು ನಿರ್ವಹಿಸಲು ಆದೇಶಿಸಿದೆ.

## I. ತರಬೇತಿಗಳ ವ್ಯವಸ್ಥೆ ಮತ್ತು ಮೇಲ್ವಿಚಾರಣೆ:

1. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯು ನಿಗದಿಪಡಿಸಿರುವ ವೇಳಾಪಟ್ಟಿಯನ್ವಯ ತರಬೇತಿ ಕಾರ್ಯಕ್ರಮಗಳು ನಡೆಯುವುದನ್ನು ಕಾರ್ಯನಿರ್ವಾಹಕ ಅಧಿಕಾರಿಗಳು ಖಾತರಿಪಡಿಸುವುದು.
2. ತಾಲ್ಲೂಕು ಮಟ್ಟದಲ್ಲಿ ನಡೆಯುವ ತರಬೇತಿ ಕಾರ್ಯಕ್ರಮಗಳಲ್ಲಿ ಅವಶ್ಯಕತೆಗನುಗುಣವಾಗಿ ಸ್ಥಳೀಯ ಸಂಪನ್ಮೂಲ ವ್ಯಕ್ತಿಗಳನ್ನು ಗುರುತಿಸಿ, ಅವರು ತರಬೇತಿ ಸಂಸ್ಥೆಯಿಂದ ಸಿದ್ಧಪಡಿಸಿರುವ ವಿಷಯ ಮಂಡನೆಗಳ (ಪಿ.ಪಿ.ಟಿ) ಪ್ರತಿ ಹಾಗೂ ಓದುವ ಸಾಮಾಗ್ರಿಯನ್ನು ಆಧರಿಸಿ ಪ್ರಶಿಕ್ಷಣಾರ್ಥಿಗಳಿಗೆ ಮಾಹಿತಿ ಕೊಡುವಂತೆ ವ್ಯವಸ್ಥೆ ಮಾಡುವುದು.
3. ತರಬೇತಿ ನಡೆಯುವ ಸ್ಥಳಗಳಲ್ಲಿ ತರಬೇತಿಗೆ ಅವಶ್ಯವಿರುವ ಎಲ್ಲಾ ರೀತಿಯ ಮೂಲಭೂತ ವ್ಯವಸ್ಥೆಗಳು ಇರುವುದನ್ನು ಖಾತರಿಪಡಿಸಿಕೊಳ್ಳುವುದು.
4. ತರಬೇತಿ ನಡೆಯುವ ಸ್ಥಳಗಳಿಗೆ ಭೇಟಿ ನೀಡಿ, ವೇಳಾಪಟ್ಟಿಗೆ ಅನುಗುಣವಾಗಿ ತರಬೇತಿ ನಡೆಯುತ್ತಿರುವ ಕುರಿತು ಖಾತರಿ ಪಡಿಸಿಕೊಳ್ಳುವುದು.
5. ಗ್ರಾಮ ಪಂಚಾಯಿತಿ ಹಂತದ ಸಿಬ್ಬಂದಿಗಳನ್ನು ತರಬೇತಿ ಕಾರ್ಯಕ್ರಮಗಳಿಗೆ ನಿಯೋಜಿಸಿದ ಸಂದರ್ಭದಲ್ಲಿ ಅವರು ತರಬೇತಿಯಲ್ಲಿ ಕಡ್ಡಾಯವಾಗಿ ಭಾಗವಹಿಸುವಂತೆ ಕ್ರಮ ವಹಿಸುವುದು. ತರಬೇತಿ ಕಾರ್ಯಕ್ರಮಗಳಿಗೆ ನಿಯೋಜಿಸಿ, ಹಾಜರಾಗದ ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಕ್ರಮ ವಹಿಸುವುದು.
6. "ತರಬೇತಿಯ ನಡೆ ಗ್ರಾಮದ ಕಡೆ" ಚಟುವಟಿಕೆಗಳನ್ನು ಗ್ರಾಮ ಪಂಚಾಯಿತಿಯ ಮಟ್ಟದಲ್ಲಿ ಆಯೋಜಿಸಲಾಗುತ್ತಿದ್ದು, ಇವುಗಳ ಸಂಪೂರ್ಣ ಮೇಲ್ವಿಚಾರಣೆಯನ್ನು ನೋಡೆಲ್ ಅಧಿಕಾರಿಗಳು ಮಾಡುವುದು ಮತ್ತು ತರಬೇತಿಗಳನ್ನು ಯಶಸ್ವಿಯಾಗಿ ಆಯೋಜಿಸಲು ಸೂಕ್ತ ನಿರ್ದೇಶನಗಳನ್ನು ನೀಡುವುದು.
7. ತಾಲ್ಲೂಕು ಮಟ್ಟದಲ್ಲಿ ಗ್ರಾಮ ಪಂಚಾಯಿತಿ/ತಾಲ್ಲೂಕು ಪಂಚಾಯಿತಿ/ಜಿಲ್ಲಾ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳಿಗೆ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಿದ ಸಂದರ್ಭದಲ್ಲಿ ಸದಸ್ಯರುಗಳು ಭಾಗವಹಿಸುವಂತೆ ಅಗತ್ಯ ಕ್ರಮವಹಿಸುವುದು, ತರಬೇತಿ ಸ್ಥಳದಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು.

## II. ತರಬೇತಿ ಚಟುವಟಿಕೆಗಳಿಗೆ ಬಿಡುಗಡೆಯಾಗುವ ಅನುದಾನದ ಲೆಕ್ಕಪತ್ರಗಳ ನಿರ್ವಹಣೆ:

ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ, ತರಬೇತಿಯ ಸಂಪೂರ್ಣ ವೆಚ್ಚವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವತಿಯಿಂದ ಭರಿಸಲಾಗುತ್ತಿದ್ದು, ಸದರಿ ಅನುದಾನವನ್ನು ನೇರವಾಗಿ ತಾಲ್ಲೂಕು ಪಂಚಾಯಿತಿಗಳಿಗೆ ಜಮಾ ಮಾಡಲಾಗುತ್ತಿದೆ. ಇತ್ತೀಚಿಗೆ ತಾಲ್ಲೂಕು ಪಂಚಾಯ್ತಿಗಳಿಂದ ವೆಚ್ಚದ ವಿವರ ಮತ್ತು ಹಣ ಬಳಕೆ ಪ್ರಮಾಣಪತ್ರಗಳನ್ನು ಸ್ವೀಕರಿಸುವಲ್ಲಿ ವಿಳಂಬವಾಗುತ್ತಿದ್ದು, ಇದರಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ಹಣಬಳಕೆ ಪತ್ರ ಸಮೇತ ವರದಿ ನೀಡಲು ಕಷ್ಟಸಾಧ್ಯವಾಗುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಈ ಹಿನ್ನೆಲೆಯಲ್ಲಿ, ಇನ್ನು ಮುಂದೆ ಸಂಸ್ಥೆಯು ಆಯೋಜಿಸುವ ಎಲ್ಲಾ ತರಬೇತಿ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ, ಈ ಕೆಳಕಂಡ ಕ್ರಮಗಳನ್ನು ವಹಿಸಲು ಎಲ್ಲಾ ನೋಡಲ್ ಅಧಿಕಾರಿಗಳಿಗೆ ನಿರ್ದೇಶಿಸಿದೆ.

1. ಅ.ನ.ಸಾ.ರಾ.ಗ್ರಾ & ಪಂ.ರಾಜ್ ಸಂಸ್ಥೆಯು ಆಯೋಜಿಸುವ ಎಲ್ಲಾ ಚಟುವಟಿಕೆಗಳ ವೆಚ್ಚದ ವಿವರ ಮತ್ತು ಹಣ ಬಳಕೆ ಪ್ರಮಾಣಪತ್ರವನ್ನು ತರಬೇತಿ ಕಾರ್ಯಕ್ರಮಗಳು ಮುಗಿದ 15 ದಿನಗಳೊಳಗೆ ನಿಗಧಿತ ನಮೂನೆಯಲ್ಲಿ, ಸಂಸ್ಥೆಗೆ ಸಲ್ಲಿಸುವಂತೆ ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಆದೇಶಿಸಿದೆ.

2. ಅ.ನ.ಸಾ.ರಾ.ಗ್ರಾ & ಪಂ.ರಾಜ್ ಸಂಸ್ಥೆಯು ಆಯೋಜಿಸುತ್ತಿರುವ ತರಬೇತಿ ಕಾರ್ಯಕ್ರಮಗಳಿಗೆ ತಾಲ್ಲೂಕು ಪಂಚಾಯಿತಿಗಳಿಗೆ ಬಿಡುಗಡೆ ಮಾಡುವ ಅನುದಾನವನ್ನು ಪ್ರತ್ಯೇಕ ಖಾತೆಯಲ್ಲಿ ನಿರ್ವಹಿಸಿ, ನಿಯಮಾನುಸಾರ ವೆಚ್ಚ ಮಾಡಿ, ನಿಗಧಿತ ಸಮಯದೊಳಗೆ ಖರ್ಚು–ವೆಚ್ಚಗಳ ವಿವರಗಳೊಂದಿಗೆ ಹಣಬಳಕೆ ಪ್ರಮಾಣಪತ್ರವನ್ನು ನಿರ್ದೇಶಕರು, ಅ.ನ.ಸಾ.ರಾ.ಗ್ರಾ & ಪಂ.ರಾಜ್ ಸಂಸ್ಥೆಗೆ ಸಲ್ಲಿಸುವುದು.

3. ಸಂಸ್ಥೆಯು ಆಯೋಜಿಸುವ ತರಬೇತಿಗಳು ಮುಗಿದ 15 ದಿವಸದಲ್ಲಿ ತರಬೇತಿ ವೆಚ್ಚದ "ವಾಸ್ತವಿಕ" ವೆಚ್ಚವನ್ನು, ಸಂಸ್ಥೆಗೆ ಸಲ್ಲಿಸಿ, ತಾಲ್ಲೂಕು ಪಂಚಾಯಿತಿಗೆ ಅನುದಾನ ಹಿಂಭರ್ತಿ ಪಡೆಯಬೇಕಾದಲ್ಲಿ ತಕ್ಷಣ ಕ್ರಮ ವಹಿಸುವುದು. ತಡವಾಗಿ ಸಲ್ಲಿಸುವ ಯಾವುದೇ ಪ್ರಸ್ತಾವನೆಗೆ ಅನುದಾನ ಬಿಡುಗಡೆ ಮಾಡಲು ಸಂಸ್ಥೆಯಲ್ಲಿ ಅನುದಾನದ ಕೊರತೆಯಾದಲ್ಲಿ ಅಂತಹ ಸಂದರ್ಭಗಳಲ್ಲಿ ವಿಳಂಬವಾಗಿ ಕ್ಲೈಮ್ ಮಾಡುವ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ನೇರ ಜವಾಬ್ದಾರಿ ಹೊರಬೇಕಾಗುತ್ತದೆ.

4. ಸಂಸ್ಥೆಯು ಏಪ್ರಿಲ್–2017 ರಿಂದ ಆಯೋಜಿಸುವ ತರಬೇತಿ ಕಾರ್ಯಕ್ರಮಗಳಿಗೆ ತಾಲ್ಲೂಕು ಪಂಚಾಯಿತಿಗಳಿಗೆ ಬಿಡುಗಡೆಯಾಗುವ ಅನುದಾನವನ್ನು ಒಂದೇ ಖಾತೆಯಲ್ಲಿ ನಿರ್ವಹಿಸಿ, ಪ್ರತಿವರ್ಷ ಸನ್ನದು ಲೆಕ್ಕಪರಿಶೋಧಕರಿಂದ ಲೆಕ್ಕ ತಪಾಸಣೆ ಮಾಡಿಸಿ, ವಿವರಗಳನ್ನು ಸಂಸ್ಥೆಯ ನಿರ್ದೇಶಕರಿಗೆ ಸಲ್ಲಿಸತಕ್ಕದ್ದು. ಇದರ ಸಂಪೂರ್ಣ ಜವಾಬ್ದಾರಿ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯದ್ದಾಗಿರುತ್ತದೆ.

5. ಅ.ನ.ಸಾ.ರಾ.ಗ್ರಾ & ಪಂ.ರಾಜ್ ಸಂಸ್ಥೆಯ ನಿರ್ದೇಶಕರು ಅಥವಾ ಸಂಸ್ಥೆಯಿಂದ ನಿಯೋಜಿಸಲ್ಪಡುವ ಇತರೆ ಅಧಿಕಾರಿಗಳು ತಾಲ್ಲೂಕು ಪಂಚಾಯಿತಿಗಳಿಗೆ ಭೇಟಿ ನೀಡಿ, ತರಬೇತಿಯ ಪ್ರಗತಿ ಮತ್ತು ಹಣಕಾಸಿನ ವಿವರಗಳನ್ನು ಪರಿಶೀಲಿಸಲು ನೋಡೆಲ್ ಅಧಿಕಾರಿಗಳು ಸಹಕರಿಸುವುದು.

6. ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲು, ಜಮಾ ಮತ್ತು ಖರ್ಚಿನ ವಿವರಗಳನ್ನು ಸಲ್ಲಿಸಲು ಹಾಗೂ ಹಣಬಳಕೆ ಪ್ರಮಾಣಪತ್ರದಲ್ಲಿ ಯಾವುದೇ ಲೋಪದೋಷಗಳು ಕಂಡುಬಂದಲ್ಲಿ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮತ್ತು ಸರ್ಕಾರಕ್ಕೆ ಸಂಸ್ಥೆಯ ನಿರ್ದೇಶಕರು ವರದಿ ಸಲ್ಲಿಸುವುದು.

ಮೇಲ್ಕಂಡ ಎಲ್ಲಾ ವಿಷಯಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಗಮನಕ್ಕೆ ತರುತ್ತಾ, ಇದರಲ್ಲಿ ಯಾವುದೇ ಲೋಪದೋಷಗಳಾದಲ್ಲಿ, ನೇರವಾಗಿ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಹೊಣೆ ಮಾಡಿ ಶಿಸ್ತು ಕ್ರಮ ಜರುಗಿಸಲಾಗುವುದು.

(ಎಂ.ಸುಮಿತ್ರ) 31/7
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

31.7.17

ಇವರಿಗೆ:

1. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
2. ರಾಜ್ಯದ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್
3. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು.
4. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸಂಬಂಧಪಟ್ಟ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ ಕಳುಹಿಸಲು ಕೋರಿದೆ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು.
3. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಪಂ. ಇಲಾಖೆ.
4. ಗಣಕ ಕೋಶ, ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
5. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.